## ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪುಟ್ಟಣ್ಣ, (ಬೆಂಗಳೂರು ಶಿಕ್ಷಕರ ಕ್ಷೇತ್ರ)ಇವರು ನಿಯಮ 330 ರಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ.

### ವಿಷಯ

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ 15,20 ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಸುಮಾರು 12000ಕ್ಕೂ ಹೆಚ್ಚು ಮಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿಯವರು ಬಹಳ ಕಡಿಮೆ ವೇತನದಲ್ಲಿ ಸೇವಾಭದ್ರತೆ, ರಜೆ ಇನ್ನಿತರ ಯಾವುದೇ ಸೌಲಭ್ಯಗಳನ್ನು ನೀಡದೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಪ್ರತಿ ವರ್ಷ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವಾಗ ಹಲವಾರು ಗೊಂದಲಗಳಾಗುತ್ತಿದ್ದು, ಕೆಲವರಿಗೆ ಉದ್ಯೋಗವಿಲ್ಲದೆ ನಿರುದ್ಯೋಗಿಗಳಾಗಿ ಬೀದಿ ಪಾಲಾಗುತ್ತಿದ್ದಾರೆ. ಅತಿಥಿ ಉಪನ್ಯಾಸಕರಲ್ಲಿ ಹಲವರಿಗೆ ಈಗಾಗಲೇ ವಯೋಮಿತಿ ಮೀರಿದ್ದು, ಬೇರೆ ಯಾವ ಸರ್ಕಾರಿ ಕೆಲಸಕ್ಕೆ ಸೇರಲು ಆಗುತ್ತಿಲ್ಲ. ಸರ್ಕಾರವು ನೀಡುತ್ತಿರುವ ವೇತನವು ಇವರ ಜೀವನ ನಡೆಸಲು ಸಾಧ್ಯವಾಗದಂತಹ ಪರಿಸ್ಥಿತಿ ಇದೆ. ಆದ್ದರಿಂದ ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಯು.ಜಿ.ಸಿ. ನಿಗದಿಗೊಳಿಸಿರುವ ವೇತನ ನೀಡುವಂತೆ, ಸೇವಾ ಭದ್ರತೆ, ಹೆರಿಗೆ ರಜೆ ಹಾಗೂ ಇನ್ನಿತರೆ ಸಮಸ್ಯೆಗಳನ್ನು ಬಗೆಹರಿಸಬೇಕೆಂಬ ವಿಷಯವನ್ನು ಮಾನ್ಯ ಉನ್ನತ ಶಿಕ್ಷಣ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ.

### ಉತ್ತರ

- ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು.

- ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು.

- ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/- ಗಳ ಗೌರವಧನವನ್ನು ನಿಗಧಿಪಡಿಸಲಾಗಿತ್ತು.

- ದಿನಾಂಕ:18-12-2003 ರ ಸರ್ಕಾರದ ಸುತ್ತೋಲೆಯನ್ವಯ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಆಯಾ ಶೈಕ್ಷಣಿಕ ವರ್ಷಕ್ಕೆ ಮಾತ್ರ ಸೀಮಿತಗೊಳಿಸಿ ನೇಮಕ ಮಾಡಿಕೊಳ್ಳಲು ಅವಕಾಶವಿದ್ದು, ಅದರಂತೆ, ಆಯಾ ಶೈಕ್ಷಣಿಕ ವರ್ಷದ ಕೊನೆಯ ದಿನಾಂಕದಂದು ಅತಿಥಿ ಉಪನ್ಯಾಸಕರ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುತ್ತಿತ್ತು.

- ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ, ದಿನಾಂಕ:10.12.2021 ರಿಂದ ಮುಷ್ಕರ ನಡೆಸಿದ್ದ ಹಿನ್ನಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಿತ್ತು.

- ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಕಾನೂನಾತ್ಮಕವಾಗಿ, ಆಡಳಿತಾತ್ಮಕವಾಗಿ ಮತ್ತು ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಪರಿಶೀಲಿಸಿ, ಸರ್ಕಾರಕ್ಕೆ ವಿಸ್ತೃತ ವರದಿಯನ್ನು ಸಲ್ಲಿಸಿತ್ತು.

- ವರದಿಯನ್ನು ಪರಿಶೀಲಿಸಿದ ಸರ್ಕಾರವು ಹೊರಡಿಸಿದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿದೆ.

  ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-

  ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-

  ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-

  ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-

- ಸರ್ಕಾರದ ನಿರ್ದೇಶನದಂತೆ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗುತ್ತಿದೆ.

- ಅಲ್ಲದೆ, ಸರ್ಕಾರದ ಪತ್ರ ಸಂಖ್ಯೆ: ಇಡಿ 171 ಡಿಸಿಇ 2023(ಇ), ದಿನಾಂಕ:31.10.2023 ರನ್ವಯ ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್ ಗೆ ಬದಲಾಗಿ, ಶೈಕ್ಷಣಿಕ ವರ್ಷಕ್ಕೆ (10 ತಿಂಗಳಿಗೆ ಮಾತ್ರ) ನೇಮಕ ಮಾಡಿಕೊಳ್ಳಲು ಸೂಚಿಸಲಾಗಿದೆ.

- ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುತ್ತಿದೆ.

- ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಮಾತ್ರ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ. ಅಲ್ಲದೆ, ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಅವರು ಈ ಹಿಂದೆ ಸರ್ಕಾರಿ ಕಾಲೇಜುಗಳಲ್ಲಿ ಸಲ್ಲಿಸಿದ ಸೇವಾ ಅವಧಿಯನ್ನು ಆಧ್ಯತೆ ಮೇರೆಗೆ ಪರಿಗಣಿಸಲಾಗುತ್ತದೆ.

- 2023-24ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರ ಬೇಡಿಕೆಗಳನ್ನು ಈಡೇರಿಸುವಂತೆ, ದಿನಾಂಕ:23.11.2023 ರಿಂದ ತರಗತಿಗಳನ್ನು ಬಹಿಷ್ಕರಿಸಿ ಮತ್ತೊಮ್ಮೆ ಮುಷ್ಕರ ನಡೆಸಿದ್ದರು.

- ಈ ಹಿನ್ನೆಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಬೇಡಿಕೆಗಳಿಗೆ ಸಂಬಂಧಿಸಿದಂತೆ, ಸರ್ಕಾರದ ಮಟ್ಟದಲ್ಲಿ ಕೈಗೊಂಡ ತೀರ್ಮಾನದಂತೆ ಅತಿಥಿ ಉಪನ್ಯಾಸಕರ ಗೌರವಧನ ಹೆಚ್ಚಳ, ಇಡಿಗಂಟು ಯೋಜನೆ, ಆರೋಗ್ಯ ವಿಮಾ ಸೌಲಭ್ಯ, ಸಾಂಧರ್ಭಿಕ ರಜೆಯನ್ನು ಈ ಕೆಳಗಿನಂತೆ ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ.

  ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ಪಾವತಿಸಲಾಗುತ್ತಿರುವ ಗೌರವಧನವನ್ನು ಅವರುಗಳ ಸೇವಾ ಅವಧಿಯ ಆಧಾರದ ಮೇಲೆ ರೂ.5000/- ರಿಂದ ರೂ.8000/-ದವರೆಗೆ ಹೆಚ್ಚಿಸಿ, ಆದೇಶಿಸಲಾಗಿರುತ್ತದೆ.

  ಮುಂದುವರೆದು, ಸದರಿ ಸರ್ಕಾರದ ಆದೇಶದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿದ 60 ವರ್ಷ ಮೀರಿದ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/- ದಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಮಂಜೂರು ಮಾಡಲಾಗಿರುತ್ತದೆ.

  ಹಾಗೆಯೇ, ಅತಿಥಿ ಉಪನ್ಯಾಸಕರ ಆರೋಗ್ಯ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ನೀಡುವ ನಿಟ್ಟಿನಲ್ಲಿ (ಅತಿಥಿ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400 + ಸರ್ಕಾರದಿಂದ ರೂ.400 ಒಟ್ಟು ರೂ.800/-) ಆರೋಗ್ಯ ವಿಮಾ ಸೌಲಭ್ಯವನ್ನು ಅನುಷ್ಠಾನಗೊಳಿಸಲು ಮಂಜೂರು ಮಾಡಲಾಗಿರುತ್ತದೆ.

  ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:14-03-2024 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ 01 ದಿನ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲಾಗಿರುತ್ತದೆ. ಹೀಗೆ ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.

- ಮಹಿಳಾ ಅತಿಥಿ ಉಪನ್ಯಾಸಕರಿಗೆ 90 ದಿನಗಳ ವೇತನ ಸಹಿತ ಮಾತೃತ್ವ ರಜೆಯನ್ನು ಮಾಡುವ ಪ್ರಸ್ತಾವನೆಯು ~~ಸರ್ಕಾರದ~~ ಪರಿಶೀಲನೆಯಲ್ಲಿರುತ್ತದೆ.

ಇಡಿ 193 ಡಿಸಿಇ 2024 (ಇ)

(ಡಾ: ಎಂ.ಸಿ. ಸುಧಾಕರ್)

ಉನ್ನತ ಶಿಕ್ಷಣ ಸಚಿವರು